# 32 ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು

## ಸಿಸಿ ನಂಃ31209/2022

**CW.10 : PW.4**

| | | |
|---|---|---|
| **ಸಾಕ್ಷಿದಾರರ ಹೆಸರು** | : | ಡಾಃ ಎನ್.ಗಾಯತ್ರಿ ಬಾಯಿ |
| **ಗಂಡನ ಹೆಸರು** | : | ಎಮ್.ವೀರ ಪ್ರತಾಪ್ |
| **ವಯಸ್ಸು** | : | 53 ವರ್ಷ |
| **ಉದ್ಯೋಗ** | : | ವೈದ್ಯಾಧಿಕಾರಿ |
| **ವಾಸಸ್ಥಳ** | : | ವಸಂತಪುರ. |

**ಸಾಕ್ಷಿಯನ್ನು ದಿನಾಂಕ 04.01.2024 ರಂದು ಕರೆಸಿ ಪ್ರತಿಜ್ಞಾ ವಿಧಿ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ :- ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-**

ನಾನು ಅಕ್ಟೋಬರ್ 2011 ರಿಂದ ಇಲ್ಲಿಯವರೆಗೆ ಮಲ್ಲೇಶ್ವರಂನ ಕೆ.ಸಿ ಜನರಲ್ ಆಸ್ಪತ್ರೆಯಲ್ಲಿ, ವೈದ್ಯಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದೇನೆ.

2. ದಿನಾಂಕ 27.07.2022 ರಂದು ರಾತ್ರಿ 10-20 ಗಂಟೆಗೆ ನಾನು ಆಸ್ಪತ್ರೆಯಲ್ಲಿದ್ದಾಗ ಚಾಸಾ.1 ರವರು ಹಲ್ಲೆ ಮಾಡಿದ ಹಿನ್ನಲೆಯಲ್ಲಿ ಆಸ್ಪತ್ರೆಗೆ ಬಂದಿದ್ದರು. ನಾನು ಸದರಿಯವರನ್ನು ಪರೀಕ್ಷಿಸಲಾಗಿ ಈ ಕೆಳಕಂಡಂತೆ ಗಾಯಗಳು ಕಂಡು ಬಂದಿರುತ್ತವೆ.

1. ಬಲ ಕಾಲಿನ ಮಧ್ಯ ಭಾಗದಲ್ಲಿ 4X1 ಸೆ. ಮೀ. ತರಚಿದ ಗಾಯ

ಸದರಿ ಗಾಯ ಸಾದ ಸ್ವರೂಪದ ಗಾಯವಾಗಿತ್ತು. ಈ ಕುರಿತು ನಾನು ಗಾಯದ ಪ್ರಮಾಣ ಪತ್ರ ನೀಡಿದ್ದೇನೆ. ಈಗ ಸದರಿ ಗಾಯದ ಪ್ರಮಾಣ ಪತ್ರ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇದೆ. ಗಾಯದ ಪ್ರಮಾಣ ಪತ್ರವನ್ನು **ನಿಪಿ.4** ಎಂದು ಸಾಕ್ಷಿಯ ಸಹಿಯನ್ನು **ನಿಪಿ.4(ಎ)** ಎಂದು ಗುರುತಿಸಲಾಯಿತು.

3. ಒಬ್ಬ ವ್ಯಕ್ತಿಗೆ ಮೋಟಾರ್ ಸೈಕಲ್ ಅನ್ನು ಹತ್ತಿಸಿದಲ್ಲಿ ನಿಪಿ-4 ರಲ್ಲಿ ನಮೂದಿಸಿದ ಗಾಯಗಳು ಉಂಟಾಗುವ ಸಾಧ್ಯತೆ ಇದೆ.

4. ಸದರಿ ವ್ಯಕ್ತಿಗೆ ಸಂಬಂಧಿಸಿದಂತೆ MLC ದಾಖಲಾತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು **ನಿಪಿ.5** ಎಂದು, ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ.5(ಎ)** ಎಂದು ಗುರುತಿಸಲಾಯಿತು. ಸದರಿ ದಿನದಂದು ಆರೋಪಿ ಮದ್ಯ ಸೇವಿಸಿದ ಬಗ್ಗೆ ಪರೀಕ್ಷಿಸಿ ವರದಿ ನೀಡುವಂತೆ ನನಗೆ ಕೋರಿಕೊಂಡಿದ್ದು ಆರೋಪಿಗೆ ಸಂಬಂಧಿಸಿದ MLC ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು **ನಿಪಿ.6** ಎಂದು, ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ.6(ಎ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗಾಗಿ:** ಆರೋಪಿ ಪರ ವಕೀಲರು ಗೈರು ಹಾಜರಾಗಿರುತ್ತಾರೆ. ಆರೋಪಿ ಪರ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಪ್ರಕಾರ ಬೆರಳಚ್ಚು ಮಾಡಲಾಯಿತು)

**ಓ ಹೇ ಕೆ ಸ ಇ**

**(ಲತಾ.ಜೆ.)**

**32 ನೇ ಎ.ಸಿ.ಎಂ.ಎಂ. ಬೆಂಗಳೂರು.**